# ದಾವಣಗೆರೆ ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಶಿವಗಂಗೋತ್ರಿ, ದಾವಣಗೆರೆ-577002.

ದೂರವಾಣಿ ಸಂಖ್ಯೆ: 08192-208029


ಸಂಖ್ಯೆ: ದಾವಿವಿ/ಶೈಕ್ಷಣಿಕ/87/2018-19/589 ದಿನಾಂಕ:18.05.2018

## :ಸಭಾ ಸೂಚನಾ ಪತ್ರ:

ವಿಷಯ: **ಪ್ರಾಂಶುಪಾಲರುಗಳ ಸಭೆ ಕರೆದಿರುವ ಬಗ್ಗೆ.**

ಉಲ್ಲೇಖ: ಮಾನ್ಯ ಕುಲಪತಿಗಳ ಆದೇಶ ದಿನಾಂಕ: 16.05.2018.

************

ಮಾನ್ಯ ಕುಲಪತಿಗಳ ಆದೇಶಾನುಸಾರ ಹಾಗೂ ಅವರ ಅಧ್ಯಕ್ಷತೆಯಲ್ಲಿ ವಿಶ್ವವಿದ್ಯಾನಿಲಯದ ವ್ಯಾಪ್ತಿಗೊಳಪಡುವ ಎಲ್ಲಾ ಸ್ನಾತಕ ಬಿ.ಇಡಿ. ಪದವಿ ಕಾಲೇಜುಗಳ ಪ್ರಾಂಶುಪಾಲರ ಸಭೆಯನ್ನು ದಿನಾಂಕ:25-05-2018ರಂದು ಮಧ್ಯಾಹ್ನ 3.00 ಗಂಟೆಗೆ ಎಂ.ಬಿ.ಎ. ಸಭಾಂಗಣದಲ್ಲಿ ಕರೆಯಲಾಗಿದೆ.

## :ಸಭೆಯ ಕಾರ್ಯಸೂಚಿ:

1. ವಿಶ್ವವಿದ್ಯಾನಿಲಯದ 2017-18ನೇ ಸಾಲಿನ ಸ್ನಾತಕ ಶೈಕ್ಷಣಿಕ ವೇಳಾಪಟ್ಟಿಯ ಬಗ್ಗೆ.
2. ಸ್ನಾತಕ ಬಿ.ಇಡಿ. ಪದವಿ ಕೋರ್ಸಿನ 2018-19ನೇ ಸಾಲಿನ ಶುಲ್ಕ ಪರಿಷ್ಕರಣೆಗಳ ಬಗ್ಗೆ.
3. ಎನ್.ಸಿ.ಟಿ.ಇ. ನಿಯಮಗಳನುಸಾರ ಅಧ್ಯಾಪಕರುಗಳ ನೇಮಕಾತಿಯಾಗಿರುವ ಬಗ್ಗೆ ಪೂರಕ ದಾಖಲೆಗಳನ್ನು ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸುವುದು.
4. ಬಿ.ಇಡಿ. ಕಾಲೇಜುಗಳಲ್ಲಿ ಅಧ್ಯಾಪಕರುಗಳ ನೇಮಕಾತಿ ಪೂರ್ವದಲ್ಲಿ ಅನುಸರಿಸಬೇಕಾದ ಕ್ರಮದ ಬಗ್ಗೆ ವಿಶ್ವವಿದ್ಯಾನಿಲಯದ ಪೂರ್ವಾನುಮತಿ ಪಡೆದುಕೊಳ್ಳುವುದು.
5. ಕ್ರೀಡಾ ಶುಲ್ಕವನ್ನು ಪರಿಷ್ಕರಿಸುವ ಬಗ್ಗೆ.
6. ವಿಶ್ವವಿದ್ಯಾನಿಲಯದ ಶೈಕ್ಷಣಿಕ/ಪರೀಕ್ಷಾ ಕಾರ್ಯಗಳನ್ನು ತ್ವರಿತವಾಗಿ ಪೂರ್ಣಗೊಳಿಸುವ ಕುರಿತು.
7. ಸರ್ಕಾರ/ವಿಶ್ವವಿದ್ಯಾನಿಲಯ ಬಯಸುವ ಮಾಹಿತಿಯನ್ನು ತಕ್ಷಣ ಒದಗಿಸುವ ಕುರಿತು.
8. ವಿದ್ಯಾರ್ಥಿಗಳಿಗೆ ಪ್ರವೇಶಾತಿ/ಹಾಜರಾತಿ/ಪರೀಕ್ಷೆಗಳಿಗೆ ಸಂಬಂಧಿಸಿದಂತೆ ವಿಶ್ವವಿದ್ಯಾನಿಲಯದ ನಿಯಮಗಳನ್ನು ವಿವರವಾಗಿ ತಿಳಿಸುವುದು ಹಾಗೂ ಸೂಕ್ತ ಕ್ರಮಕೈಗೊಳ್ಳುವುದು.
9. ವಿದ್ಯಾರ್ಥಿಗಳ ಯಾವುದೇ ಕೋರಿಕೆಗಳನ್ನು ತ್ವರಿತವಾಗಿ ಪೂರ್ಣಗೊಳಿಸುವುದು.
10. ಸರ್ಕಾರದ ಆದೇಶಾನುಸಾರ ಕಾಲೇಜು ಹಂತದಲ್ಲಿ ವಿವಿಧ ಸಮಿತಿಗಳನ್ನು ರಚಿಸುವ/ಇನ್ನಿತರೆ ಕಾರ್ಯಕ್ರಮಗಳನ್ನು ಜಾರಿಗೊಳಿಸಲು ಕ್ರಮಕೈಗೊಂಡು ವಿಶ್ವವಿದ್ಯಾನಿಲಯಕ್ಕೆ ಮಾಹಿತಿ ನೀಡುವುದು.
    a) ಮಾದಕ ವಸ್ತುಗಳ ಮಾರಾಟ ಮತ್ತು ಬಳಕೆಯ ವಿರುದ್ಧ ಜಾಗೃತಿ ಮೂಡಿಸುವ ಬಗ್ಗೆ.
    b) ಮಾನವ ಅಂಗಾಂಗಗಳ ದಾನದ ಕುರಿತು ಜಾಗೃತಿ ಮೂಡಿಸುವ ಬಗ್ಗೆ.

ಪು.ತಿ.ನೋ.

c) ಆಧಾರ ಉಯೋಗದ ಕುರಿತು ಜಾಗೃತಿ ಮೂಡಿಸುವ ಬಗ್ಗೆ.

d) ಡಿಸೆಂಬರ್ 10ರ ಮಾನವ ಹಕ್ಕುಗಳ ದಿನದ ಪ್ರತಿಜ್ಞೆ ಮಾಡುವ ಕುರಿತು.

e) ಪ್ರತಿ ವರ್ಷ ಜೂನ್ 05ರಂದು ಎಲ್ಲಾ ಕಾಲೇಜುಗಳಲ್ಲಿ ಪರಿಸರ ದಿನಾಚರಣೆಯನ್ನು ಆಚರಿಸುವುದು ಹಾಗೂ ಸಸಿ ನೆಡುವ ಕಾರ್ಯಕ್ರಮಗಳನ್ನು ಕಡ್ಡಾಯವಾಗಿ ಹಮ್ಮಿಕೊಳ್ಳುವುದು.

11. ಪರೀಕ್ಷಾ ಸುಧಾರಣೆ ಕುರಿತು.

12. ಅಧ್ಯಕ್ಷರ ಅಪ್ಪಣೆ ಮೇರೆಗೆ ಇತರೆ ವಿಷಯಗಳು.

ಮೇಲ್ಕಂಡ ಸಮಿತಿ ಸದಸ್ಯರುಗಳು ತಪ್ಪದೇ ಸಭೆಗೆ ಹಾಜರಾಗಲು ತಿಳಿಸಲಾಗಿದೆ. **ಈ ಸಂಬಂಧ ವಿಶ್ವವಿದ್ಯಾನಿಲಯದಿಂದ TA/DA ಪಾವತಿಸುವುದಿಲ್ಲ.**

ಆದೇಶಾನುಸಾರ,

(ಪ್ರೊ|| ಪಿ. ಲಕ್ಷ್ಮಣ್) 19/5/18
ಕುಲಸಚಿವರು

ಕುಲಸಚಿವರು
ದಾವಣಗೆರೆ ವಿಶ್ವವಿದ್ಯಾನಿಲಯ
ಶಿವಗಂಗೋತ್ರಿ, ದಾವಣಗೆರೆ - 577002.

ಗೆ,

ವಿಶ್ವವಿದ್ಯಾನಿಲಯದ ವ್ಯಾಪ್ತಗೊಳಪಡುವ ಎಲ್ಲಾ ಸ್ನಾತಕ B.Ed. ಪದವಿ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.

ಪ್ರತಿ:-

1. ಕುಲಸಚಿವರು (ಪರೀಕ್ಷಾಂಗ), ದಾವಣಗೆರೆ ವಿಶ್ವವಿದ್ಯಾನಿಲಯ, ಶಿವಗಂಗೋತ್ರಿ, ದಾವಣಗೆರೆ.
2. ಹಣಕಾಸು ಅಧಿಕಾರಿಗಳು, ದಾವಣಗೆರೆ ವಿಶ್ವವಿದ್ಯಾನಿಲಯ, ಶಿವಗಂಗೋತ್ರಿ, ದಾವಣಗೆರೆ.
3. ಮಾನ್ಯ ಕುಲಪತಿಗಳ/ಕುಲಸಚಿವರ ಆಪ್ತಕಾರ್ಯಾಲಯ, ದಾವಣಗೆರೆ ವಿಶ್ವವಿದ್ಯಾನಿಲಯ, ಶಿವಗಂಗೋತ್ರಿ, ದಾವಣಗೆರೆ.
4. ಕಛೇರಿ ಪ್ರತಿ.

Sathola 111